# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 08.11.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಡಾ॥ ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಸದಸ್ಯರು | ಹಾಜರಿದ್ದರು |
| 4 | ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಗೋವಿಂದರಾಜು ಕೆ. | ಕಂದಾಯ ವಸೂಲಿಗಾರರು ಸ.ಕಂ.ಅ. (ಯಶವಂತಪುರ) | ಸದಸ್ಯರು | ಹಾಜರಿದ್ದರು |
| 6 | ಚನ್ನೇಶಪ್ಪ | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 7 | ಅನಿಲ್ ಕುಮಾರ್ ಎಂ. | ಸಹಾಯಕ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |
| 8 | ಸುಜಾತಾ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 9 | ಸತ್ಯವತಿ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 10 | ಶಿವಪ್ರಕಾಶ್ ಎಂ. | ಬಿ.ಎಲ್.ಓ. ಹೋಂ ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 11 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 12 | ಬಿ. ಜಾನ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**1) ಘನತ್ಯಾಜ್ಯ ನಿರ್ವಹಣೆ :**

ಪೌರ ಕಾರ್ಮಿಕರು ವಾರ್ಡ್‌ನಲ್ಲಿ ಕೆಲಸ ಮಾಡಲು ಮಾಸ್ಕ್ ಹಾಗೂ ಕೈಗವಸುಗಳನ್ನು ಸಮರ್ಪಕವಾಗಿ ಒದಗಿಸುವ ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಿಗೆ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ವಾರ್ಡ್-37ರಲ್ಲಿ ಕೆಲವೊಂದು ಕಡೆ ಬ್ಲಾಕ್‌ಸ್ಪಾಟ್‌ಗಳು ನಿರ್ಮಾಣವಾಗಿದ್ದು, ತೆರವುಗೊಳಿಸಲು, ಬ್ಯಾನರ್‌ಗಳು ಹಾಗೂ ಸಿಸಿಟಿವಿ ಕ್ಯಾಮರಾಗಳ ಅವಶ್ಯಕತೆ ಇರುವುದಾಗಿ ಅಧ್ಯಕ್ಷರಿಗೆ ಮನವಿ ಮಾಡಿದರು.

ಪ್ರಸ್ತಾಪಿತ ವಿಷಯದ ಬಗ್ಗೆ ಅಧ್ಯಕ್ಷರು ಮಾತನಾಡಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

**2) ಕಾಮಗಾರಿ ಇಲಾಖೆ :**

ವಾರ್ಡ್‌ಲ್ಲಿ ಕೆಲವೊಂದು ಕಡೆ ಡೆಬ್ರಿಸ್ ಕಂಡುಬಂದಿದ್ದು, ಅದನ್ನು ಕೂಡಲೇ ತೆರವುಗೊಳಿಸಬೇಕೆಂದು ಸಹಾಯಕ ಅಭಿಯಂತರರು ಅಧ್ಯಕ್ಷರಿಗೆ ತಿಳಿಸಿದರು.

**3) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ಆರೋಗ್ಯ ಪರಿವೀಕ್ಷಕರೊಂದಿಗೆ ಚರ್ಚಿಸಲಾಗಿದ್ದು, ಮಾಸ್ಕ್ ಹಾಕದೇ ತಿರುಗಾಡುವ ಸಾರ್ವಜನಿಕರಿಗೆ ದಂಡ ವಿಧಿಸಲು ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸುತ್ತೋಲೆ ಹೊರಡಿಸಿರುತ್ತದೆ. ಮಾರ್ಷಲ್‌ಗಳು ಅದರಂತೆ, ಕ್ರಮ ಕೈಗೊಂಡು ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

**4) ಬೆಸ್ಕಾಂ:-**

ವಿದ್ಯುತ್ ಲೈನ್‌ಗಳಿಗೆ ತಡೆಯಾಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ತೆರವುಗೊಳಿಸಿದ ಮರದ ಕೊಂಬೆಗಳನ್ನು ಹತ್ತಿರದಲ್ಲಿ ಗುರುತಿಸಲ್ಪಟ್ಟ ಡಂಪಿಂಗ್ ಯಾರ್ಡ್‌ಗಳಲ್ಲಿ ವಿಲೇವಾರಿ ಮಾಡಲು ಸೂಚಿಸಲಾಯಿತು.

(4) ಬಿಡಬ್ಲ್ಯೂಎಸ್‌ಎಸ್‌ಬಿ :

ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳ ಸುತ್ತ ಹೊಸ ರಿಂಗ್‌ಗಳನ್ನು ಅಳವಡಿಸುತ್ತಿರುವುದರಿಂದ, ಸದರಿ ಕಾರ್ಯ ಮಾಡುವ ಗುತ್ತಿಗೆದಾರರು ಎಲ್ಲಾ ಕಾಮಗಾರಿ ಪೂರ್ಣಗೊಂಡ ನಂತರ ಡೆಬ್ರಿಸ್‌ಗಳನ್ನು ರಸ್ತೆಯಲ್ಲೇ ಬಿಟ್ಟಿದ್ದು ತೆರವುಗೊಳಸದಿರುವ ಕಾರಣ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿದ್ದು, ಅದರಂತೆ, ಸಭೆಗೆ ಹಾಜರಿದ್ದ, ಬಿಡಬ್ಲ್ಯೂಎಸ್‌ಎಸ್‌ಬಿ ಕೆಲಸ ಪರಿವೀಕ್ಷಕರಿಗೆ ತಿಳಿಸಿ, ಗುತ್ತಿಗೆದಾರರಿಗೆ ಸದರಿ ಡೆಬ್ರಿಸ್‌ಗಳನ್ನು ತುರ್ತಾಗಿ ತೆರವುಗೊಳಸುವಂತೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಮೇಶ್)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ